ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.

<u>ಸಿ.ಸಿ.428/2025</u>

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಆರ್. ರವಿ | ಪಿ.ಡಬ್ಲ್ಯೂ.2 |
| ತಂದೆಯ ಹೆಸರು | : | ರಾಮಕೃಷ್ಣಪ್ಪ | ಸಿ.ಡಬ್ಲ್ಯೂ.3 |
| ವಯಸ್ಸು | : | 59 ವರ್ಷ | |
| ವೃತ್ತಿ | : | ಟೈಲರಿಂಗ್ | |
| ವಾಸ | : | ಕೋಡಿಕ್ಯಾಂಪ್, ತರೀಕೆರೆ | |

<u>ದಿನಾಂಕಃ 11-11-2025 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-</u>

ಆರೋಪಿಯ ಪರಿಚಯವಿಲ್ಲ. ಚಾಸಾ-2 ರವರ ಪರಿಚಯವಿದೆ. ಮಹಜರ್ ಅನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು ನನ್ನ ಸಹಿ ನಿಪಿ-1(ಬಿ) ಇರುತ್ತದೆ. ಸದರಿ ಸಹಿಯನ್ನು 6 ತಿಂಗಳ ಹಿಂದೆ ಠಾಣೆಯಲ್ಲಿ ಹಾಕಿರುತ್ತೇನೆ. ಯಾವ ವಿಚಾರಕ್ಕಾಗಿ ಸದರಿ ಸಹಿಯನ್ನು ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಎಪಿಪಿರವರು ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಯನ್ನು ನೀಡಲಾಯಿತು)

<u>ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ-</u>

ದಿಃ17.02.2025 ರಂದು ಮಧ್ಯಾಹ್ನಃ02.50 ರಿಂದ 03.50 ರವರೆಗೆ ಪೊಲೀಸರು ಘಟನಾ ಸ್ಥಳದಲ್ಲಿ ನಿಪಿ-1 ರಂತೆ ಮಹಜರ್ ಅನ್ನು ತಯಾರಿಸಿದಾಗ ನಾನು ಸ್ಥಳದಲ್ಲಿ ಹಾಜರಿದ್ದು ಮಹಜರ್ ನ ವಿಷಯಗಳನ್ನು ತಿಳಿದುಕೊಂಡು ನಿಪಿ-1(ಬಿ) ರಂತೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಈಗ ನನಗೆ ತೋರಿಸುತ್ತಿರುವ ಭಾವಚಿತ್ರವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ದಿಃ18.02.2025 ರಂದು ನಾನು ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ ‘ ದಿಃ17.02.2025 ರಂದು ಮಧ್ಯಾಹ್ನಃ02.00 ಗಂಟೆಯಲ್ಲಿ ---- ಪುನಃ ನೋಡಿದರೆ ಗುರುತಿಸುತ್ತೇನೆ’ ಎಂದು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆ ಭಾಗವನ್ನು ನಿಪಿ-3 ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ಗೊತ್ತಿದ್ದರೂ ಕೂಡಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-</u>

(ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ).

<u>ಮರು ವಿಚಾರಣೆಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

C.C.No.428/2025
PW-2 CW-3

ಎಸ್‌ಆರ್‌ಃ